# ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ರವರ ಅಧ್ಯಕ್ಷತೆಯಲ್ಲಿ ಇಂದು ನಡೆದ ನೀತಿ ಆಯೋಗದ ಆಡಳಿತ ಮಂಡಳಿಯ 6ನೇ ಸಭೆಯಲ್ಲಿ ಭಾಗವಹಿಸಿ, ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರು ಭಾಗವಹಿಸಿ ರಾಜ್ಯದ ವಿವಿಧ ಅಭಿವೃದ್ಧಿ ಕಾರ್ಯಗಳ ಕುರಿತು ಮಂಡಿಸಿದ ವಿಷಯಗಳ ಪ್ರಮುಖಾಂಶಗಳು;





- ಭಾರತವನ್ನು ಜಾಗತಿಕ ಮಟ್ಟದಲ್ಲಿ ಉತ್ಪಾದನಾ ವಲಯದ ಪ್ರಮುಖ ತಾಣವಾಗಿ ರೂಪಿಸುವುದು, ಕೃಷಿ ವಲಯಕ್ಕೆ ಹೊಸ ಸ್ವರೂಪ, ಭೌತಿಕ ಮೂಲಸೌಕರ್ಯಗಳ ಸುಧಾರಣೆ, ಮಾನವ ಸಂಪನ್ಮೂಲ ಅಭಿವೃದ್ಧಿ, ತಳಮಟ್ಟದಲ್ಲಿ ದಕ್ಷ ನಾಗರಿಕ ಸೇವಾ ಸೌಲಭ್ಯ, ಆರೋಗ್ಯ ಮತ್ತು ಪೌಷ್ಟಿಕತೆ ಮೊದಲಾದ ವಿಷಯಗಳ ಕುರಿತು ಸಭೆಯಲ್ಲಿ ಚರ್ಚೆ

- 'Ease of doing business' ಜೊತೆಗೆ 'Ease of living'ಗೂ ಆದ್ಯತೆ ನೀಡುವಂತೆ ಪ್ರಧಾನಮಂತ್ರಿಗಳಿಂದ ಸಲಹೆ

- ಕೋವಿಡ್-19 ಸಾಂಕ್ರಾಮಿಕದ ಹೊರತಾಗಿ ರಾಜ್ಯದ ಹಣಕಾಸು ಪರಿಸ್ಥಿತಿ ಕರ್ನಾಟಕ ವಿತ್ತೀಯ ಹೊಣೆಗಾರಿಕೆ ಕಾಯ್ದೆ- 2002ರಲ್ಲಿ ನಿಗದಿಪಡಿಸಿದ ಮಾನದಂಡದ ಮಿತಿಯಲ್ಲಿದೆ

- ಕೌಶಲ್ಯ ಅಭಿವೃದ್ಧಿಗೆ ಉತ್ತೇಜನ ನೀಡಲು ಕೈಗಾರಿಕೋದ್ಯಮಿಗಳ ಸಹಯೋಗದೊಂದಿಗೆ ತರಬೇತಿ ವ್ಯವಸ್ಥೆಯ ಉನ್ನತೀಕರಣ; ನೂತನ ತಂತ್ರಜ್ಞಾನ, ಕೌಶಲ್ಯಗಳ ತರಬೇತಿ ನೀಡಲು ಕ್ರಮ

- ರಾಜ್ಯದಲ್ಲಿ ಕೈಗಾರಿಕಾ ಅಭಿವೃದ್ಧಿಗಾಗಿ ಕೈಗೊಂಡಿರುವ ಕ್ರಮಗಳಲ್ಲಿ ಮುಖ್ಯವಾಗಿ ನೂತನ ಕೈಗಾರಿಕಾ ನೀತಿ 2020-25, ಅಫೀಡವಿಟ್ ಆಧಾರಿತ ಅನುಮೋದನಾ ವ್ಯವಸ್ಥೆ, ರಫ್ತು ಉತ್ತೇಜನಕ್ಕೆ ಕ್ರಮಗಳು, ಸ್ಥಳೀಯ ಉತ್ಪನ್ನಗಳಿಗೆ ಜಾಗತಿಕ ಮಾರುಕಟ್ಟೆ ಒದಗಿಸುವ ಕುರಿತು ಅಮೇಜಾನ್ ಹಾಗೂ ಫ್ಲಿಪ್ ಕಾರ್ಟ್ ಇ-ಕಾಮರ್ಸ್ ಸಂಸ್ಥೆಗಳೊಂದಿಗೆ ಮಾಡಿಕೊಂಡಿರುವ ಒಪ್ಪಂದ ಮೊದಲಾದ ಉಪಕ್ರಮಗಳ ಕುರಿತು ಮುಖ್ಯಮಂತ್ರಿಗಳಿಂದ ವಿವರಣೆ

- ರಾಜ್ಯದಲ್ಲಿ ದೇಶದಲ್ಲೇ ಅತ್ಯಂತ ಕನಿಷ್ಠ ನಿರುದ್ಯೋಗ ಪ್ರಮಾಣ (ಸುಮಾರು ಶೇ. 3.6)

- ಸಮಗ್ರ ಕೃಷಿ ಪದ್ಧತಿ ಅಳವಡಿಸುವ ಕುರಿತು ಕಾರ್ಯಪಡೆ ರಚನೆ; ಪೌಷ್ಟಿಕತೆಯ ಮಟ್ಟ ಹೆಚ್ಚಿಸಲು ಸಿರಿ ಧಾನ್ಯಗಳ ಉತ್ಪಾದನೆಗೆ ಉತ್ತೇಜನ

- ಆಯಾ ಪ್ರಾದೇಶಿಕ ಸಂಪನ್ಮೂಲಗಳಿಗೆ ಅನುಗುಣವಾಗಿ ರೈತರಿಗೆ ಬೆಳೆ ಬೆಳೆಯಲು ರೈತ ಸಂಪರ್ಕ ಕೇಂದ್ರಗಳ ಮೂಲಕ ಮಾಹಿತಿ; ಸ್ಥಳೀಯ ಜಾನುವಾರು ತಳಿಗಳ ಸಂರಕ್ಷಣೆಗೆ ಕ್ರಮ

- ವೈಜ್ಞಾನಿಕ ಮಾರುಕಟ್ಟೆ ಮಾಹಿತಿ ಕೋಶವನ್ನು ಸ್ಥಾಪಿಸುವ ಮೂಲಕ ರೈತರ ಆದಾಯ ಹೆಚ್ಚಿಸಲು ಆದಾಯ ಆಧಾರಿತ ಸಿದ್ಧಾಂತದೆಡೆಗೆ ಗಮನ
- ಆತ್ಮನಿರ್ಭರ್ ಯೋಜನೆಯಡಿ ಹೆಚ್ಚುವರಿಯಾಗಿ ಬೆಳೆದ ಹಣ್ಣು ಮತ್ತು ತರಕಾರಿಗಳಿಗೆ ಆನ್ ಲೈನ್ ಮಾರುಕಟ್ಟೆ ಹಾಗೂ ಪೂರಕ ಮೂಲಸೌಕರ್ಯ
- ಅಟಲ್ ಭೂ ಜಲ ಯೋಜನೆಯಡಿ ಅಂತರ್ಜಲ ಕೊರತೆ ಇರುವ 41 ತಾಲ್ಲೂಕುಗಳಲ್ಲಿ ಜಲ ಸಂರಕ್ಷಣೆ ಯೋಜನೆ ಅನುಷ್ಠಾನ
- ನೀತಿ ಆಯೋಗದ 49 ಮಹತ್ವಾಕಾಂಕ್ಷೆಯ ಮಾನದಂಡಗಳ ಅನ್ವಯ ರಾಜ್ಯದ 114 ಹಿಂದುಳಿದ ತಾಲ್ಲೂಕುಗಳ ಸಮಗ್ರ ಅಭಿವೃದ್ಧಿಗೆ ಕ್ರಮ
- ಹಿಂದುಳಿದ ತಾಲ್ಲೂಕುಗಳು ಹಾಗೂ ವಲಯಗಳ ಅಭಿವೃದ್ಧಿಗೆ ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿಯ ನೆರವು ಪಡೆಯಲು "ಆಕಾಂಕ್ಷಾ" ಪೋರ್ಟಲ್ ಪ್ರಾರಂಭಿಸಲು ಕ್ರಮ
- ಸೇವಾ ಸಿಂಧು ಯೋಜನೆಯಡಿ ಜನತೆಗೆ 750 ಕಾಗದರಹಿತ ಸೇವೆ
- 'ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ' ಅಡಿ ದೇಶದಲ್ಲಿಯೇ ಅತಿ ಹೆಚ್ಚು 3409 ಆಸ್ಪತ್ರೆಗಳು ನೋಂದಣಿ
- ಆಯುಷ್ಮಾನ್ ಭಾರತ್ ಯೋಜನೆಯಡಿ 2753 ಕೋಟಿ ರೂ. ವೆಚ್ಚದಲ್ಲಿ 13 ಲಕ್ಷ ಜನರಿಗೆ ಚಿಕಿತ್ಸಾ ಸೌಲಭ್ಯ; ರಾಜ್ಯದಲ್ಲಿ 4607 ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳು ಕಾರ್ಯಾರಂಭ
- ಆತ್ಮನಿರ್ಭರ್ ಯೋಜನೆಯಡಿ ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಸೂಪರ್-ಸ್ಪೆಷಾಲಿಟಿ ಚಿಕಿತ್ಸಾ ಸೌಲಭ್ಯಗಳನ್ನು ಒದಗಿಸಲು ಪ್ರಸ್ತಾವ; ಆಯುಷ್ ಪದ್ಧತಿಗೆ ಉತ್ತೇಜನ ನೀಡುವ ಸಮಗ್ರ ಸಾರ್ವಜನಿಕ ಆರೋಗ್ಯ ನೀತಿ ಜಾರಿಗೆ

## ಬೇಡಿಕೆಗಳು

- ಭದ್ರಾ ಮೇಲ್ದಂಡೆ ಮತ್ತು ಕೃಷ್ಣಾ ಮೇಲ್ದಂಡೆ ಯೋಜನೆಗಳನ್ನು ರಾಷ್ಟ್ರೀಯ ಯೋಜನೆ ಎಂದು ಘೋಷಿಸಲು ಮನವಿ
- ನದಿ ತಿರುವು ಯೋಜನೆಗಳಿಗೆ ಅನುದಾನ ಹಾಗೂ ಕಾಲುವೆಗಳ ಆಧುನೀಕರಣ ಯೋಜನೆಯಡಿ ರಾಜ್ಯದಿಂದ 6673 ಕೋಟಿ ರೂ. ಗಳ ಪ್ರಸ್ತಾವನೆ ಅನುಮೋದನೆಗೆ ಮನವಿ
- ಖಾಸಗಿ ಸಹಭಾಗಿತ್ವದಲ್ಲಿ 3 ಬಂದರುಗಳ ಅಭಿವೃದ್ಧಿ, ರೈಲ್ವೆಯೊಂದಿಗೆ ಜಂಟಿ ಪಾಲುದಾರಿಕೆಯಲ್ಲಿ ಬೆಂಗಳೂರು ಉಪನಗರ ರೈಲು ಅಭಿವೃದ್ಧಿ ಯೋಜನೆ ಜಾರಿ
- ಕಾನೂನು ತೊಡಕುಗಳು ಮತ್ತು ಪರಿಸರ ಹೋರಾಟಗಳಿಂದಾಗಿ ಮೂಲಸೌಕರ್ಯ ಯೋಜನೆಗಳು ವಿಳಂಬವಾಗುತ್ತಿರುವ ಹಿನ್ನೆಲೆಯಲ್ಲಿ ನ್ಯಾಯಾಲಯಗಳಲ್ಲಿ ಇಂತಹ ವ್ಯಾಜ್ಯಗಳ ತ್ವರಿತ ವಿಲೇವಾರಿಗೆ ವ್ಯವಸ್ಥೆ ರೂಪಿಸುವಂತೆ ಮನವಿ
- ನೂತನ ಶಿಕ್ಷಣ ನೀತಿಯ ಅನುಷ್ಠಾನಕ್ಕಾಗಿ ಕೈಗೊಳ್ಳಬೇಕಾಗಿರುವ ಹಲವು ಉಪಕ್ರಮಗಳಿಗೆ ಆರ್ಥಿಕ ನೆರವು ನೀಡಲು ಕೋರಿಕೆ
- ಎಲ್ಲ ಸರ್ಕಾರಿ ಕಚೇರಿಗಳಿಗೆ ಇಂಟರ್ನೆಟ್ ಸೌಲಭ್ಯ ಒದಗಿಸಲು ಆಪ್ಟಿಕಲ್ ಫೈಬರ್ ನೆಟ್ ವರ್ಕ್ ರೂಪಿಸಲು ನಿರ್ಧರಿಸಲಾಗಿದ್ದು, ಇದಕ್ಕೆ 4300 ಕೋಟಿ ರೂ. ನೆರವು ಕೋರಿಕೆ